ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2018–19 ದಿನಾಂಕ: 05–01–2019

# ಪತ್ರಿಕಾ ಆಮಂತ್ರಣ

## 1. ದಕ್ಷಿಣ ಭಾರತ ರಾಜ್ಯಗಳ ವಿಜ್ಞಾನ ಮೇಳ – 2019

**ಉದ್ಘಾಟನೆ:**

**ಹೆಚ್.ಡಿ. ಕುಮಾರಸ್ವಾಮಿ, ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ**

**ಮುಖ್ಯ ಅತಿಥಿಗಳು:**

**ಡಿ. ವಿ. ಸದಾನಂದಗೌಡ, ಕೇಂದ್ರದ ಸಾಂಖ್ಯಿಕ ಮತ್ತು ಕಾರ್ಯಕ್ರಮ ಅನುಷ್ಠಾನ, ರಾಸಾಯನಿಕ ಮತ್ತು ರಸಗೊಬ್ಬರ ಸಚಿವರು**

**ಶ್ರೀಮತಿ ನಿರ್ಮಲಾ ಸೀತಾರಾಮನ್, ಕೇಂದ್ರದ ರಕ್ಷಣಾ ಸಚಿವರು.**

**ಅಧ್ಯಕ್ಷತೆ:**

**ಎನ್.ಎ. ಹ್ಯಾರಿಸ್, ಶಾಸಕರು, ಶಾಂತಿನಗರ ವಿಧಾನಸಭಾ ಕ್ಷೇತ್ರ.**

**ದಿನಾಂಕ: 07–01–2018, ಸೋಮವಾರ, ಸಮಯ: ಬೆಳಿಗ್ಗೆ 10–30 ಗಂಟೆಗೆ**

**ಸ್ಥಳ: ಸೇಂಟ್ ಜೋಸೆಫ್ ಇಂಡಿಯನ್ ಹೈಸ್ಕೂಲ್ ಸಭಾಂಗಣ, ವಿಠಲ್‌ಮಲ್ಯ ರಸ್ತೆ, ಬೆಂಗಳೂರು.**

# ಪತ್ರಿಕಾ ಪ್ರಕಟಣೆ

**ಸಂಖ್ಯೆ: 23/23**

# ಅಂತಿಮ ಮತದಾರರ ಪಟ್ಟಿ ಪ್ರಕಟ

ಬೆಂಗಳೂರು, ಜನವರಿ 5, (ಕರ್ನಾಟಕ ವಾರ್ತೆ)

ಭಾರತ ಚುನಾವಣಾ ಆಯೋಗದ ನಿರ್ದೇಶನಗಳನ್ವಯ ವಿಧಾನಸಭಾ ಕ್ಷೇತ್ರಗಳ ಮತದಾರರ ಪಟ್ಟಿಯ ಸಂಕ್ಷಿಪ್ತ ಪರಿಷ್ಕರಣೆ ಕಾರ್ಯಕ್ರಮ –2019 ಕ್ಕೆ ಸಂಬಂಧಿಸಿದಂತೆ ಜನವರಿ 16 ರಂದು ಕರ್ನಾಟಕ ರಾಜ್ಯದ ಎಲ್ಲಾ 224 ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಅಂತಿಮ ಮತದಾರರ ಪಟ್ಟಿಗಳ ಪ್ರತಿಗಳನ್ನು ಸಾರ್ವಜನಿಕರ ಹಾಗೂ ರಾಜಕೀಯ ಪಕ್ಷಗಳ ಮಾಹಿತಿಗಾಗಿ ಜಿಲ್ಲಾಧಿಕಾರಿಗಳ ಕಚೇರಿ, ಮತದಾರರ ನೋಂದಣಾಧಿಕಾರಿಗಳ ಕಚೇರಿ, ಸಹಾಯಕ ಮತದಾರರ ನೋಂದಣಾಧಿಕಾರಿಗಳ ಕಚೇರಿ ಹಾಗೂ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಮತಗಟ್ಟೆಗಳಲ್ಲಿ ಸಾರ್ವಜನಿಕರ ತಿಳುವಳಿಕೆಗಾಗಿ ಪ್ರಕಟಿಸಲಾಗುವುದು.

ಕರ್ನಾಟಕ ರಾಜ್ಯದ ಎಲ್ಲಾ 224 ವಿಧಾನಸಭ ಕ್ಷೇತ್ರಗಳ ಅಂತಿಮ ಮತದಾರರ ಪಟ್ಟಿಗಳನ್ನು ಮುಖ್ಯ ಚುನಾವಣಾಧಿಕಾರಿಗಳು ಕರ್ನಾಟಕ ರಾಜ್ಯ ಇವರ ಅಧಿಕೃತ ಜಾಲತಾಣ www.ceokarnataka.kar.nic.in ನಲ್ಲಿ ಪಿ.ಡಿ.ಎಫ್ ಆವೃತ್ತಿಯನ್ನು ದಿನಾಂಕ: 16–01–2019 ರಂದು ಪ್ರಕಟಿಸಲಾಗುವುದು. ಸಾರ್ವಜನಿಕರು ತಮ್ಮ ಹೆಸರು ಮತದಾರರ ಪಟ್ಟಿಯಲ್ಲಿ ಸೇರ್ಪಡೆಯಾದ ಬಗ್ಗೆ ಪರಿಶೀಲಿಸುವುದು ಸರಿಯಾದ ಹಾಗೂ ಹೆಸರನ್ನು ನಮೂದುಗಳೊಂದಿಗೆ ನೋಂದಾಯಿಸಿದ ಬಗ್ಗೆ ಖಚಿತಪಡಿಸಿಕೊಳ್ಳುವಂತೆ ಕೋರಲಾಗಿದೆ.

ಮತದಾರರ ಪಟ್ಟಿಗಳ ಅಂತಿಮ ಪ್ರಕಟಣೆಯ ತುರವಾಯ, ಹೊಸ ಸೇರ್ಪಡೆ, ತಿದ್ದುಪಡಿ ಮತ್ತು ಹೆಸರು ತೆಗೆದು ಹಾಕುವಿಕೆ ಪ್ರಕ್ರಿಯೆ ನಿರಂತರವಾಗಿ ಕೈಗೊಂಡು ಕಲೋಚಿತಗೊಳಿಸಲಾಗುವುದು ಎಂದು ಸಾರ್ವಜನಿಕರ ಗಮನಕ್ಕೆ ಈ ಮೂಲಕ ತರಲಾಗಿದೆ ಎಂದು ಮುಖ್ಯ ಚುನಾವಣಾಧಿಕಾರಿಯವರ ಕಚೇರಿ ಪ್ರಕಟಣೆ ತಿಳಿಸಿದೆ.

**ಸಂಖ್ಯೆ: 24/24**

# ತಾತ್ಕಾಲಿಕ ಆಯ್ಕೆಪಟ್ಟಿ ಪ್ರಕಟ

ಬೆಂಗಳೂರು, ಜನವರಿ 5, (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ಅಬಕಾರಿ ಇಲಾಖೆಯಲ್ಲಿನ ಅಬಕಾರಿ ರಕ್ಷಕರು (ಪುರುಷ) 952 ಹುದ್ದೆಗಳಿಗೆ ತಾತ್ಕಾಲಿಕ ಆಯ್ಕೆಪಟ್ಟಿಯನ್ನು ದಿನಾಂಕ: 04–01–2019 ರಂದು ಆಯೋಗದ ಅಂತರ್ಜಾಲ ತಾಣದಲ್ಲಿ http://kpsc.kar.nic.in. "Provisional List" ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಲಾಗಿದೆ.

ಆಕ್ಷೇಪಣೆಗಳನ್ನು ಸಲ್ಲಿಸುವ ಅಭ್ಯರ್ಥಿಗಳು ಈ ಆಯ್ಕೆಪಟ್ಟಿ ಪ್ರಕಟಿಸಿದ ದಿನಾಂಕದಿಂದ 7 ದಿನಗಳೊಳಗೆ ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, "ಉದ್ಯೋಗ ಸೌಧ", ಬೆಂಗಳೂರು – 560 001 ಇವರಿಗೆ ಸಲ್ಲಿಸಬಹುದಾಗಿದೆ. ನಿಗದಿಪಡಿಸಿದ ದಿನಾಂಕ: 10–01–2019 ಆಗಿದ್ದು ನಂತರ ಸ್ವೀಕರಿಸಲಾಗುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಕರ್ನಾಟಕ ಲೋಕಸೇವಾ ಆಯೋಗದ ಪ್ರಕಟಣೆ ತಿಳಿಸಿದೆ.

**ಸಂಖ್ಯೆ: 25/25**

# ಜನವರಿ 7 ರಿಂದ 11 ರವರೆಗೆ
# ನಗರದಲ್ಲಿ ದಕ್ಷಿಣ ವಲಯ ರಾಜ್ಯಗಳ ವಿಜ್ಞಾನ ಮೇಳ

ಬೆಂಗಳೂರು, ಜನವರಿ 5, (ಕರ್ನಾಟಕ ವಾರ್ತೆ)

2018–19ನೇ ಸಾಲಿನಲ್ಲಿ ದಕ್ಷಿಣ ವಲಯ ರಾಜ್ಯಗಳ ವಿಜ್ಞಾನ ಮೇಳವನ್ನು ಜನವರಿ 7 ರಿಂದ 11 ರವರೆಗೆ ನಗರದ ಸೆಂಟ್ ಜೋಸೆಫ್ ಇಂಡಿಯನ್ ಪ್ರೌಢ ಶಾಲಾ ಆವರಣ, ವಿಠಲ್ ಮಲ್ಯರಸ್ತೆ, ಬೆಂಗಳೂರು ಇಲ್ಲಿ ಆಯೋಜಿಸಲಾಗಿದೆ.

ಈ ವಿಜ್ಞಾನ ಮೇಳದ ಉದ್ಘಾಟನೆಯನ್ನು ಜನವರಿ 7 ರಂದು ಬೆಳಿಗ್ಗೆ 10–30 ಗಂಟೆಗೆ ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿ ಅವರು ನೆರವೇರಿಸಲಿದ್ದಾರೆ. ಕೇಂದ್ರದ ಸಾಂಖ್ಯಿಕ ಮತ್ತು ಕಾರ್ಯಕ್ರಮ ಅನುಷ್ಠಾನ, ರಾಸಾಯನಿಕ ಮತ್ತು ರಸಗೊಬ್ಬರ ಸಚಿವ ಡಿ. ವಿ. ಸದಾನಂದಗೌಡ, ಕೇಂದ್ರದ ರಕ್ಷಣಾ ಸಚಿವೆ ಶ್ರೀಮತಿ ನಿರ್ಮಲಾ ಸೀತಾರಾಮನ್ ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ.

ಇದೇ ಸಂದರ್ಭದಲ್ಲಿ ವಿಜ್ಞಾನ ಮತ್ತು ವಸ್ತು ಪ್ರದರ್ಶನದ ಉದ್ಘಾಟನೆಯನ್ನು ಉಪಮುಖ್ಯಮಂತ್ರಿ ಡಾ ಜಿ. ಪರಮೇಶ್ವರ್ ಅವರು ಉದ್ಘಾಟಿಸಲಿದ್ದಾರೆ. ಸಮಾರಂಭ ಅಧ್ಯಕ್ಷತೆಯನ್ನು ಶಾಂತಿನಗರ

ವಿಧಾನಸಭಾ ಕ್ಷೇತ್ರದ ಶಾಸಕ ಎನ್.ಎ. ಹ್ಯಾರಿಸ್ ಅವರು ವಹಿಸಲಿರುವ ಈ ಸಮಾರಂಭದ ಕರ್ನಾಟಕ ವಿಧಾನಸಭೆ ಸಭಾಧ್ಯಕ್ಷ ಕೆ.ಆರ್. ರಮೇಶ್‌ಕುಮಾರ್, ಕರ್ನಾಟಕ ವಿಧಾನ ಪರಿಷತು ಸಭಾಪತಿ ಕೆ. ಪ್ರತಾಪ್‌ಚಂದ್ರಶೆಟ್ಟಿ, ಲೋಕಸಭಾ ಸದಸ್ಯರು, ರಾಜ್ಯ ಸಚಿವ ಸಂಪುಟದ ಸದಸ್ಯರು, ವಿಧಾನಸಭಾ ಸದಸ್ಯರು, ವಿಧಾನ ಪರಿಷತ್ ಸದಸ್ಯರು ಸೇರಿದಂತೆ ಅನೇಕ ಗಣ್ಯರು ಪಾಲ್ಗೊಳ್ಳಲಿದ್ದಾರೆ.

**ಸಂಖ್ಯೆ: 26/26**

## ಕಬ್ಬನ್‌ಪಾರ್ಕಿನಲ್ಲಿ ಈ ಭಾನುವಾರ

**ಬೆಂಗಳೂರು, ಜನವರಿ 5, (ಕರ್ನಾಟಕ ವಾರ್ತೆ)**

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. **ದಿನಾಂಕ: 06-01-2019 ರ** ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1) ಕಬ್ಬನ್ ಉದ್ಯಾನವನದ ಆವರಣದಲ್ಲಿ ಬೆಳಿಗ್ಗೆ 8.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ **ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.

2) ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ **ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ** ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

**I ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ**

- ಬೆಳಿಗ್ಗೆ 7.00 ಗಂಟೆಯಿಂದ 8.00 ಗಂಟೆಯವರೆಗೆ **ಯೂನಿವರ್ಸ್ ಆರ್ಟ್ ಫೌಂಡೇಶನ್** ಸಂಸ್ಥೆಯ ಸಹಯೋಗದೊಂದಿಗೆ **ಪ್ರೀತಿ ಪ್ರಸಾದ್, ರವರಿಂದ ಭರತನಾಟ್ಯ** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

**ಬೆಂಗಳೂರು ಜಲಮಂಡಲಿ : ಜನವರಿ 07 ರಂದು ಸಕಾನಿಅ(ದಕ್ಷಿಣ-1) ಉಪವಿಭಾಗದಲ್ಲಿ ನೀರಿನ ಅದಾಲತ್**

- ಬೆಂಗಳೂರು ಜಲಮಂಡಲಿಯ ಸಕಾನಿಅ(ದಕ್ಷಿಣ-1) ಉಪವಿಭಾಗದಲ್ಲಿ ದಿನಾಂಕ:07.01.2019 ರಂದು ಸೋಮವಾರ ನೀರಿನ ಬಿಲ್ಲು, ನೀರು ಮತ್ತು ಒಳಚರಂಡಿ ಸಂಪರ್ಕಕಲ್ಪಿಸುವಲ್ಲಿನ ವಿಳಂಬ, ಗೃಹ ಬಳಕೆಯಿಂದ ಗೃಹೇತ್ತರ ಬಳಕೆ ಪರಿವರ್ತನೆ ವಿಳಂಬ ಮತ್ತಿತರ ಕುಂದುಕೊರತೆಗಳಿಗೆ ಸಂಬಂಧಿಸಿದಂತೆ ನೀರಿನ ಅದಾಲತ್‌ಅನ್ನು ಬೆಳಗ್ಗೆ 9.30 ರಿಂದ 11:00 ಗಂಟೆಯವರೆಗೆ ನಡೆಸಲಾಗುತ್ತದೆ.

- ದಿನಾಂಕ: 07.01.2019 ರಂದು ಸಕಾನಿಅ(ದಕ್ಷಿಣ-1) ಉಪವಿಭಾಗದ ಬನಗಿರಿ, ಪೂರ್ಣಪ್ರಜ್ಞಾಲೇಔಟ್, ಬನಶಂಕರಿ, ಪದ್ಮನಾಭನಗರ, ಕುಮಾರಸ್ವಾಮಿ ಲೇಔಟ್-1, ಇಸ್ರೋ ಲೇಔಟ್. ಸೇವಾಠಾಣೆಗಳಿಗೆ ಸಂಬಂಧಿಸಿದಂತೆ ಬನಗಿರಿನಗರ ದೇವೇಗೌಡ ಪೆಟ್ರೋಲ್ ಬಂಕ್‌ಹತ್ತಿರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಕಚೇರಿಯಲ್ಲಿ ಸಮಸ್ಯೆಗಳನ್ನು ಪರಿಶೀಲಿಸಿ ಬಗೆಹರಿಸಲಾಗುತ್ತದೆ.

- ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಬೇಕಾದ ದೂರವಾಣಿ ಸಂಖ್ಯೆ: ಕಾರ್ಯ ನಿರ್ವಾಹಕ ಅಭಿಯಂತರರು (ದಕ್ಷಿಣ); 22945143. ಸಹಾಯಕ ಕಾರ್ಯ ನಿರ್ವಾಹಕ ಅಭಿಯಂತರರು (ದಕ್ಷಿಣ-1) ಉಪವಿಭಾಗ; 22945198.

- ಕುಂದು ಕೊರತೆಗಳಿಗೆ ಸಂಬಂಧಿಸಿದಂತೆ ಮಂಡಲಿಯ 24/7 ದೂರು ನಿರ್ವಹಣಾ ಕೇಂದ್ರದ ದೂರವಾಣಿ ಸಂಖ್ಯೆ:22238888, ಸಹಾಯವಾಣಿ 1916 ಹಾಗೂ ವಾಟ್ಸ್ಆಪ್ ಸಂಖ್ಯೆ:8762228888 ಗೆ ಸಂಪರ್ಕಿಸಬಹುದಾಗಿದೆ.

- ಸಾರ್ವಜನಿಕರು ಮೇಲಿನ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳಲು ಈ ಅದಾಲತ್ ಸೌಲಭ್ಯ ಬಳಸಿಕೊಳ್ಳ ಬಹುದಾಗಿದೆ.

## BWSSB: Water Adalath in AEE(South-1) sub division on January 7th

- BWSSB water Adalath is held on 07.01.2019 in AEE(South-1) sub division from 9:30.am to 11.00 am to settle the grievances concerned with the water billing, delay in providing water supply & sanitary connections, delay in converting from domestic connection to non domestic connection & other related issues.

- The disputes of consumers of Banagiri Poornapragna layout, Banashankari, Padmanabhanagar, Kumaraswamy layout-1, Isro layout Service station coming under (South-1) sub division, will be discussed in detail & problems will be settled in the office of the Assistant Executive Engineer (South -1) sub division, Banagiri Nagar, Near Devegowda Petrol Bunk.
- Details regarding the adalath can be obtained by the office of EE(South): 22945143, or office of AEE (South-1):22945198
- For any problems regarding the water supply and all, publics can contact 24x7 call centre: 22238888 helpline number:1916 & whats app no: 8762228888.
- Public can utilize this adalath facilities to solve the problems regarding water supply.